ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE : 11/2/2021

ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಕೆಲಸ ಮಾಡುವೆ | ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿಕೆ

# ಪರಿಷತ್ ಘನತೆ ಎತ್ತಿ ಹಿಡಿಯಲು ಪ್ರಯತ್ನ

**ಬೆಂಗಳೂರು:** ವಿಧಾನ ಪರಿಷತ್‌ನ ಘನತೆಯನ್ನು ಎತ್ತಿ ಹಿಡಿಯಲು, ಅದರ ಪರಂಪರೆ ಮುಂದು ವರಿಸಲು, ಕಾರ್ಯಕಲಾಪಗಳನ್ನು ಸುಗಮವಾಗಿ ನಡೆಸಲು ಪ್ರಯತ್ನಿಸುತ್ತೇನೆ. ಸರ್ಕಾರಕ್ಕೂ ಮುಜುಗರ ಉಂಟು ಮಾಡದೇ ವಿರೋಧ ಪಕ್ಷಕ್ಕೂ ಅವಕಾಶ ನೀಡಿ ಎಲ್ಲರನ್ನೂ ವಿಶ್ವಾಸದಿಂದ ತೆಗೆದುಕೊಂಡು ಹೋಗುವ ಕೆಲಸ ಮಾಡುತ್ತೇನೆ ಎಂದು ನೂತನ ಸಭಾಪತಿ ಬಸವರಾಜ್ ಹೊರಟ್ಟಿ ಹೇಳಿದ್ದಾರೆ.



ಉದಯವಾಣಿ ಕಚೇರಿಗೆ ಆಗಮಿಸಿ 'ಸಂವಾದ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪರಿಷತ್ತಿನ ಘನತೆ ಎತ್ತಿ ಹಿಡಿಯುವ ಕೆಲಸವಾಗಬೇಕಿದೆ. ಇದೊಂದು ಗಂಜಿ ಕೇಂದ್ರ, ವೃದ್ಧಾಶ್ರಮ ಎಂಬ ಮಾತುಗಳು ಕೇಳಿ ಬರುತ್ತಿವೆ. ಆದರೆ, ಈ ಸದನ ಬಗ್ಗೆ ಸಾಮಾನ್ಯರಿಗೂ ಗೌರವ ಮೂಡುವಂತೆ ಮಾಡುವ ಪ್ರಯತ್ನ ಮಾಡಲಾಗುವುದು. ಕಚೇರಿಯಲ್ಲಿ ಕೆಳ ಹಂತದಿಂದ ಮೇಲ್‌ಸ್ತರದವರೆಗೂ ಇರುವ ಅಧಿಕಾರಿಗಳಲ್ಲಿ ಎಲ್ಲರಿಗೂ ಗೌರವದೊರೆಯುವಂತೆಮಾಡುತ್ತೇನೆ. ಬಹಳ ವರ್ಷಗಳಿಂದ ಇಲ್ಲಿಯೇ ಠಿಕಾಣಿ ಹೂಡಿರುವವರನ್ನು ವರ್ಗಾವಣೆ ಮಾಡುವ ಕಾರ್ಯಕ್ಕೆ ಚಾಲನೆ ನೀಡುತ್ತೇವೆ ಎಂದು ಹೇಳಿದರು.

ಪ್ರತಿದಿನ ಕಾರ್ಯಸೂಚಿಯನ್ನು ಅಂದೇ ಪೂರ್ಣಗೊಳಿಸುವ ಪ್ರಯತ್ನ ಮಾಡಲಾಗುವುದು ಎಂದು ತಮ್ಮ ಆಶಯವನ್ನು ಹಂಚಿಕೊಂಡರು.

ಈ ಸದನದಲ್ಲಿ ಅನೇಕ ಮಹಾನ್ ನಾಯಕರು ಆಗಿ ಹೋಗಿದ್ದಾರೆ. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಗಣ್ಯರು ಕೆಲಸಮಾಡಿದ್ದಾರೆ. ಆದರೆ, ಈಗ ಈ ಸದನಕ್ಕೆ ವಿಧಾನಸಭೆ ಚುನಾವಣೆಯಲ್ಲಿ ಸೋತವರು ಬರುವಂತಹ ಪರಿಸ್ಥಿತಿ ಉಂಟಾಗಿದೆ. ಕಲೆ, ಸಂಗೀತ, ಸಾಹಿತ್ಯ, ಪತ್ರಿಕೋದ್ಯಮ ಕ್ಷೇತ್ರದವರು ಬರುತ್ತಿದ್ದರು. ಎಲ್ಲ ಪಕ್ಷಗಳು ಈ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳಬೇಕಿದೆ. ಆಯಾ ಕ್ಷೇತ್ರದಲ್ಲಿ ಸಾಧನೆ ಮಾಡಿದವರನ್ನು ಗುರುತಿಸುವ ಕೆಲಸವಾಗಬೇಕಿದೆ. ಸದ್ಯಕ್ಕೆ ಯಾವುದೇ ಬದಲಾವಣೆ ಆಗುವುದಿಲ್ಲ ಎಂಬ ಅಸಹಾಯಕತೆ ಇದ್ದರೂ. ಭರವಸೆ ಇದೆ ಎಂದರು. ರಾಜ್ಯಪಾಲರೂ ಕೂಡ ಈ ಬಗ್ಗೆ ಗಂಭೀರವಾಗಿ ಪರಿಗಣಿಸಬೇಕು. ಹಿಂದೆ ಸಕ್ರಿಯ ರಾಜಕಾರಣಿ ಎಂದು ರಾಜ್ಯಪಾಲರೊಬ್ಬರು ನಾಮನಿರ್ದೇಶನವನ್ನು ತಿರಸ್ಕರಿಸಿದ್ದರು. ಈ ರೀತಿ ತೀರ್ಮಾನ ತೆಗೆದುಕೊಳ್ಳುವಂತಾಗಬೇಕು ಎಂದು ಹೊರಟ್ಟಿ ತಿಳಿಸಿದರು.

## ಎಲ್ಎಚ್ ಸಮಸ್ಯೆಗೆ ಪರಿಹಾರ

ಶಾಸಕರ ಭವನದಲ್ಲಿ 15 ಸಾವಿರ ಜನಸಂಖ್ಯೆ ಇರುವ ಪಟ್ಟಣಕ್ಕೆ ಬೇಕಾಗುವಷ್ಟು ನೀರು ಮತ್ತು ವಿದ್ಯುತ್ ಬಳಕೆಯಾಗುತ್ತದೆ. ಆದರೆ, ಅಲ್ಲಿ ಶೇ 15 ರಷ್ಟು ಶಾಸಕರು ಮಾತ್ರ ಉಳಿದುಕೊಳ್ಳುತ್ತಾರೆ. ಉಳಿದಂತೆ ಅವರ ಆಪ್ತರು, ಗನ್ ಮ್ಯಾನ್‌ಗಳು ಉಳಿದುಕೊಳ್ಳುತ್ತಾರೆ. ಅಲ್ಲಿ ನಿರಂತರ ಅಭಿವೃದ್ಧಿ ಹೆಸರಿನಲ್ಲಿ ಕೆಲಸಗಳು ನಡೆಯುತ್ತಿರುತ್ತವೆ. ಅನಗತ್ಯ ವೆಚ್ಚ ಮಾಡಲಾಗುತ್ತದೆ. ಶಾಸಕರ ರೂಮುಗಳ ನವೀಕರಣದ ಹೆಸರಿನಲ್ಲಿ ಲಕ್ಷಾಂತರ ರೂ. ವೆಚ್ಚ ಮಾಡಲಾಗುತ್ತಿದೆ. ಆ ರೀತಿಯ ಚಟುವಟಿಕೆಗಳ ನಿಯಂತ್ರಣಕ್ಕೆ ಪ್ರಯತ್ನಿಸಲಾಗುವುದು ಎಂದು ಹೇಳಿದರು. ಸದ್ಯದ ಪರಿಸ್ಥಿತಿಯಲ್ಲಿ ಒಮ್ಮೆಲೆ ಎಲ್ಲವನ್ನೂ ಸರಿಪಡಿಸುವ ಭ್ರಮೆ ಇಲ್ಲ. ಹಂತ ಹಂತವಾಗಿ ಶಾಸಕರ ಮನ ಪರಿವರ್ತನೆಯನ್ನೂ ಮಾಡುವ ಮೂಲಕ ಬದಲಾವಣೆಗೆ ಶ್ರಮಿಸಲಾಗುವುದು ಎಂದು ಹೇಳಿದರು.